ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು-1.
ದೂ. 080-22372738 E-mail: nregs-ka@nic.in

ಗ್ರಾಅಪ 247 ಉಖಾಯೋ 2014 ದಿನಾಂಕ: 08-07-2016

## ಅಧಿಕೃತ ಜ್ಞಾಪನ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಅನುಷ್ಠಾನಗೊಳಿಸಲಾಗುತ್ತಿರುವ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಗ್ರಾಮ ಮಟ್ಟದಲ್ಲಿ ನಡೆಸುವ/ಅನುಷ್ಠಾನ ಮಾಡುತ್ತಿರುವ ಕಾಮಗಾರಿಗಳನ್ನು ಉಸ್ತುವಾರಿ ಮಾಡಲು, ಜಾಗೃತಿ ಮತ್ತು ಮೇಲುಸ್ತುವಾರಿ ಸಮಿತಿಯನ್ನು/ತಂಡವನ್ನು ರಚಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 41 ರಾಗ್ರಾಉ 06 ಬೆಂಗಳೂರು ದಿನಾಂಕ: 01-02-2007ರ ಕರ್ನಾಟಕ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಖಂಡ ಸಂಖ್ಯೆ: 20ರಂತೆ

2. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ನಿಯಮ 61-ಎರಂತೆ

3. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನಕ್ಕೆ ಕುರಿತಂತೆ ಕಾರ್ಯನಿರ್ವಹಣಾ ಲೆಕ್ಕ ಪರಿಶೋಧನಾ ವರದಿಯಲ್ಲಿ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರ ಕಂಡಿಕೆ 10.6 ಅಕ್ಷೇಪಣೆಯಂತೆ

~~~~~~

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ, ಕಾಮಗಾರಿಗಳ ಅನುಷ್ಠಾನವನ್ನು ಉಸ್ತುವಾರಿ ಮಾಡಲು, ಗ್ರಾಮ ಪಂಚಾಯತ್‌ಗಳ ಪ್ರತಿ ಗ್ರಾಮದಲ್ಲಿ ಜಾಗೃತಿ ಮತ್ತು ಮೇಲುಸ್ತುವಾರಿ ಸಮಿತಿ/ತಂಡವನ್ನು ರಚಿಸುವ ಕುರಿತು, ಉಲ್ಲೇಖ(1) ಮತ್ತು ಉಲ್ಲೇಖ(2)ರನ್ವಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣ ನೀರು ಮತ್ತು ನೈರ್ಮಲ್ಯಕ್ಕಾಗಿ ರಚಿಸಲಾದ ಸಮಿತಿಯನ್ನೇ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳ ಅನುಷ್ಠಾನಕ್ಕೆ ಬಳಸಿಕೊಳ್ಳುವಂತೆ ಯೋಜನೆಯ ನಿಯಮ 20ರಲ್ಲಿ ತಿಳಿಸಲಾಗಿರುವುದನ್ನು ಸ್ಮರಿಸಬಹುದಾಗಿದೆ. ಇದನ್ನು ಅನುಸರಿಸಿ ಸಮಿತಿಯನ್ನು ಕಾರ್ಯಾನುಷ್ಠಾನಕ್ಕೆ ತರಲು ಈ ಹಿಂದೆ ಪತ್ರವನ್ನು ಸಹ ಬರೆಯಲಾಗಿತ್ತು.

ಉಲ್ಲೇಖ(3)ರಲ್ಲಿ CAGರವರು ಯೋಜನೆ ಅನುಷ್ಠಾನದ ಕೆಲವು ಆಯ್ದ ಜಿಲ್ಲೆಗಳ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಲೆಕ್ಕ ತಪಾಸಣೆ ನಡೆಸಲಾಗಿ ಸದರಿ ಸಮಿತಿಯನ್ನು ರಚಿಸಿರುವ ಬಗ್ಗೆ ಆಗಲಿ ಅಥವಾ ಇದರ ಕಾರ್ಯಾನುಷ್ಠಾನದ ಬಗ್ಗೆ ಆಗಲಿ ಯಾವುದೇ ಮಾಹಿತಿಯನ್ನು ನಿರ್ವಹಣೆ ಮಾಡಿರುವುದಿಲ್ಲವೆಂದು ತಾವು ನೀಡಿರುವ ಕಾರ್ಯನಿರ್ವಹಣಾ ಲೆಕ್ಕ ಪರಿಶೋಧನಾ ವರದಿಯ ಕಂಡಿಕೆ 10.6ರಲ್ಲಿ ಸಮಿತಿ ರಚಿಸದಿರುವ ಕುರಿತು ಆಕ್ಷೇಪಣೆ ವ್ಯಕ್ತ ಪಡಿಸಿರುತ್ತಾರೆ.
~~~~~~

ಈ ಹಿನ್ನೆಲೆಯಲ್ಲಿ ಉಲ್ಲೇಖ(1) ಮತ್ತು ಉಲ್ಲೇಖ(2)ರನ್ವಯ 9 ಸದಸ್ಯರುಗಳುಳ್ಳ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯನ್ನು ಯೋಜನೆಯ ನಿಯಮ 20ರಲ್ಲಿ ತಿಳಿಸಿರುವಂತೆ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಸಂಸ್ಥೆಗೆ ರಚಿತವಾಗಿರುವ ಸಮಿತಿಯನ್ನೇ ಬಳಸಿಕೊಳ್ಳತಕ್ಕದೆಂದು ಈ ಮೂಲಕ ಪುನರ್‌ಚ್ಚರಿಸಲಾಗಿದೆ. ಮೇಲಾಗಿ ಸದರಿ ವಿಷಯವು ಕೂಡ ವಿಧಾನ ಸಭೆಯ ಅಧಿವೇಶನದಲ್ಲಿ ಚರ್ಚೆಯಾಗಿರುತ್ತದೆ. ಆದ್ದರಿಂದ ಈ ಆಯುಕ್ತಾಲಯದಿಂದ ಮುಂದಿನ ಆದೇಶ ಬರುವರೆಗೂ ಸದರಿ ಸಮಿತಿಯ ಕಾರ್ಯಾನಿರ್ವಹಣೆಯನ್ನು ಯಾವುದೇ ಕಾರಣಕ್ಕೂ ನಿಲ್ಲಿಸಬಾರದೆಂದು ಈ ಮೂಲಕ ನಿರ್ದೇಶಿಸಲಾಗಿದೆ.

ಆಯುಕ್ತರು, ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
2. ರಾಜ್ಯದ ಎಲ್ಲಾ ಜಿಲ್ಲೆಗಳ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಬೆಂಗಳೂರು
5. ಪ್ರಾದೇಶಿಕ ಆಯುಕ್ತರು ಬೆಂಗಳೂರು, ಮೈಸೂರು, ಗುಲ್ಬರ್ಗಾ, ಬೆಳಗಾಂ
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
7. ಎಲ್ಲಾ ಅನುಷ್ಠಾನ ಸಂಸ್ಥೆಗಳ ಮುಖ್ಯಸ್ಥರುಗಳಿಗೆ:
   i. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
   ii. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು,
   iii. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
   iv. ರೇಷ್ಮೆ ಅಭಿವೃದ್ಧಿ ಆಯುಕ್ತರು, ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
   v. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್ ಬಾಗ್ ರಸ್ತೆ, ಬೆಂಗಳೂರು.
   vi. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ವಿ.ವಿ.ಟವರ್, ಬೆಂಗಳೂರು.
   vii. ಮುಖ್ಯ ಅಭಿಯಂತರರು (ಸಣ್ಣ ನೀರಾವರಿ) ಉತ್ತರವಲಯ ಬಿಜಾಪುರ/ದಕ್ಷಿಣವಲಯ, ಕೆ.ಆರ್.ವೃತ್ತ, ಬೆಂಗಳೂರು.
   viii. ಮುಖ್ಯ ಅಭಿಯಂತರರು ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ, ಬೆಂಗಳೂರು.
   ix. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
   x. ಆಯುಕ್ತರು ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ, ಗ್ರಾಮೀಣ ನೀರು ಸರಬರಾಜು ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಾವೇರಿ ಭವನ, ಬೆಂಗಳೂರು
8. ಆಯುಕ್ತರು, ಪಶುಸಂಗೋಪನ ಇಲಾಖೆ, ವಿ.ವಿ.ಟವರ್, ಬೆಂಗಳೂರು

9. ಆಯುಕ್ತರು ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
10. ವಿಶೇಷ ಆಯುಕ್ತರು, ಎಮ್.ಜಿ.ಎನ್.ಆರ್.ಇ.ಜಿ.ಎ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪ ಇಲಾಖೆ.
11. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪ ಇಲಾಖೆ.
12. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
14. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿಯ ರಾಜ್ಯ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು
15. ಮುಖ್ಯ ಆರ್ಥಿಕ ಸಲಹೆಗಾರು/ಜಂಟಿ ನಿರ್ದೇಶಕರು, ತೋಟಗಾರಿಕೆ/ತಾಂತ್ರಿಕ/ಆಡಳಿತ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪ ಇಲಾಖೆ.
16. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
17. ವಿಶೇಷಾಧಿಕಾರಿ, ಗಣಕಕೋಶ, ಗ್ರಾಅಪ ಇಲಾಖೆ. ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
18. ಶ್ರೀ. ವೈ. ಮಹಾಂಕಾಳಪ್ಪ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳವರ ಮಾಹಿತಿಗಾಗಿ ಹಾಗೂ ಇದನ್ನು ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
19. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
20. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ